ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

1995ರ ನಂತರ ಪ್ರಾರಂಭವಾದ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಿರುವ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) -

29 (202) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿರುವ ಖಾಸಗಿ ಅನುದಾನ ರಹಿತ ಶಾಲೆಗಳೆಷ್ಟು ; ಅವು ಯಾವುವು; (ಕಿರಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಸಂಸ್ಥೆವಾರು, ಶಾಲೆಯ ಹೆಸರು, ಮಾಧ್ಯಮವಾರು, ಜಿಲ್ಲಾವಾರು, ತಾಲ್ಲೂಕುವಾರು ಪ್ರತ್ಯೇಕವಾಗಿ ವಿವರವಾದ ಮಾಹಿತಿ ನೀಡುವುದು)

(ಆ) 1995ರ ನಂತರ ಪ್ರಾರಂಭವಾಗಿರುವ ಅನುದಾನ ರಹಿತ ಶಾಲೆಗಳಿಗೆ ಇಲ್ಲಿಯವರೆಗೂ ಅನುದಾನವನ್ನು ನೀಡದೇ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಶಾಲೆಗಳಿಗೆ ಸರ್ಕಾರವು ಯಾವ ಕಾಲಮಿತಿಯೊಳಗೆ ಅನುದಾನವನ್ನು ನೀಡಲಾಗುವುದು ?